All India Radio: Bangalore
Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

07.11.2025 6.40 p.m.

***************

ಮುಖ್ಯಾಂಶಗಳು

- ರೈತರಿಗೆ ಪ್ರತಿ ಟನ್ ಕಬ್ಬಿಗೆ ೩ ಸಾವಿರದ ೩೦೦ ರೂಪಾಯಿ ನೀಡಲು ಸರ್ಕಾರ ನಿರ್ಧಾರ
- ಕಬ್ಬು ಬೆಳೆಗಾರರ ಸಮಸ್ಯೆ ಬಗೆಹರಿಸಲು ಪ್ರಧಾನಿಗೆ ಮುಖ್ಯಮಂತ್ರಿ ಪತ್ರ; ಬಿಜೆಪಿ ಅಸಮಾಧಾನ
- ಬೆಂಗಳೂರು - ಎರ್ನಾಕುಲಂ ವಂದೇ ಭಾರತ್ ರೈಲಿಗೆ ನಾಳೆ ಪ್ರಧಾನಿ ವರ್ಚುವಲ್ ಮೂಲಕ ಚಾಲನೆ
- ಸಾರಿಗೆ ನೌಕರರ ವೇತನ ಪರಿಷ್ಕರಣೆ ಕುರಿತಂತೆ ಶೀಘ್ರವೇ ಮುಖ್ಯಮಂತ್ರಿ ಜೊತೆ ಸಭೆ- ಸಚಿವ ರಾಮಲಿಂಗಾರೆಡ್ಡಿ
- ಶಿಕ್ಷಣ ಸಂಸ್ಥೆಗಳು, ಆಸ್ಪತ್ರೆಗಳ ಆವರಣಗಳಿಂದ ಬೀದಿ ನಾಯಿಗಳನ್ನು ಸ್ಥಳಾಂತರಿಸುವಂತೆ ರಾಜ್ಯ ಸರ್ಕಾರಕ್ಕೆ ಸುಪ್ರೀಂಕೋರ್ಟ್ ನಿರ್ದೇಶನ

***************

ರಾಜ್ಯದ್ಯಾಂತ ಕಳೆದ ಏಳು ದಿನಗಳಿಂದ ಪ್ರತಿಭಟನೆ ನಡೆಸುತ್ತಿದ್ದ ಕಬ್ಬು ಬೆಳೆಗಾರರ ಹೋರಾಟಕ್ಕೆ ಸ್ಪಂದಿಸಿದ ಸರ್ಕಾರ ರೈತರಿಗೆ ಪ್ರತಿ ಟನ್ ಕಬ್ಬಿಗೆ ೩ ಸಾವಿರದ ೩೦೦ ರೂಪಾಯಿ ನೀಡಲು ನಿರ್ಧರಿಸಿದೆ.

ವಿಧಾನಸೌಧದಲ್ಲಿಂದು ಕಾರ್ಖಾನೆ ಮಾಲೀಕರು ಹಾಗೂ ರೈತರೊಂದಿಗೆ ಸುದೀರ್ಘ ಚರ್ಚೆ ನಡೆಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಸುದ್ದಿಗೋಷ್ಠಿ ನಡೆಸಿ ಮಾತನಾಡಿ, ರೈತರ ಹಿತದೃಷ್ಟಿಯಿಂದ ಪ್ರತಿ ಟನ್ ಕಬ್ಬಿಗೆ ೩ ಸಾವಿರದ ೩೦೦ ರೂಪಾಯಿ ನೀಡಲು ನಿರ್ಧರಿಸಲಾಗಿದೆ ಎಂದು ತಿಳಿಸಿದ್ದಾರೆ.

ರಾಜ್ಯದಲ್ಲಿ ೧೨ ಕಾರ್ಖಾನೆ ಹೊರತು ಪಡಿಸಿ ಉಳಿದೆಲ್ಲಾ ಸಕ್ಕರೆ ಕಾರ್ಖಾನೆಗಳು ಖಾಸಗಿ ಮಾಲಿಕತ್ವದಲ್ಲಿವೆ ಎಂದು ಹೇಳಿದ್ದಾರೆ.

ಕಬ್ಬಿನ ೧೧.೨೫ ರಿಕವರಿಗೆ ಸಕ್ಕರೆ ಕಾರ್ಖಾನೆಗಳು ೩ ಸಾವಿರದ ೨೫೦ ರೂಪಾಯಿ ಪಾವತಿಸಬೇಕು. ಇದಕ್ಕೆ ಸರ್ಕಾರ ೫೦ ರೂಪಾಯಿ ಹೆಚ್ಚುವರಿಯಾಗಿ ಪಾವತಿಸಲಿದೆ. ಇದು ಇಡೀ ರಾಜ್ಯಕ್ಕೆ ಅನ್ವಯವಾಗಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಹಾಗೂ ಸಂಬಂಧಿತ ಸಚಿವರನ್ನು ಭೇಟಿ ಮಾಡಲು ನಿರ್ಧರಿಸಿದ್ದು, ಕಬ್ಬಿಗೆ ಕನಿಷ್ಠ ಬೆಂಬಲ ಬೆಲೆ, ಸಕ್ಕರೆ ರಫ್ತು ಹಾಗೂ ಎಥೆನಾಲ್ ಹಂಚಿಕೆ ಕುರಿತಂತೆ ಚರ್ಚಿಸಲು ಸಭೆಯಲ್ಲಿ ನಿರ್ಧಾರ ಕೈಗೊಳ್ಳಲಾಗಿದೆ.

***************

ಕಬ್ಬಿನ ಬೆಲೆ ನಿಗದಿಗೆ ಆಗ್ರಹಿಸಿ ವಿಜಯಪುರ, ಬಾಗಲಕೋಟೆ ಸೇರಿದಂತೆ ರಾಜ್ಯದ ಹಲವೆಡೆ ರೈತರ ಪ್ರತಿಭಟನೆ ನಡೆಸಿದರು.

ಕಬ್ಬಿಗೆ ಸೂಕ್ತ ಬೆಲೆಗೆ ಒತ್ತಾಯಿಸಿ ಕನ್ನಡಪರ ಸಂಘಟನೆಗಳು ನೀಡಿದ್ದ ಬೆಳಗಾವಿ ಬಂದ್‌ಗೆ ನೀರಸ ಪ್ರತಿಕ್ರಿಯೆ ವ್ಯಕ್ತವಾಗಿದೆ. ಕನ್ನಡಪರ ಕಾರ್ಯಕರ್ತರು ಟೈರ್‌ಗಳಿಗೆ ಬೆಂಕಿ ಹಚ್ಚಿ ಪ್ರತಿಭಟನೆಗೆ ಮುಂದಾದಾಗ ಪೊಲೀಸರು, ಕಾರ್ಯಕರ್ತರನ್ನು ವಶಕ್ಕೆ ಪಡೆದರು.

ಇನ್ನೊಂದೆಡೆ ಬಾಗಲಕೋಟೆ ಜಿಲ್ಲೆಯಲ್ಲಿ ಕಬ್ಬಿಗೆ ಪ್ರತಿ ಟನ್‌ಗೆ ೩ ಸಾವಿರದ ೫೦೦ ರೂಪಾಯಿ ಬೆಲೆ ನೀಡಬೇಕೆಂದು ಆಗ್ರಹಿಸಿ ರೈತರು ಪ್ರತಿಭಟನೆ ನಡೆಸಿದರು.

***************

ಕಬ್ಬು ಬೆಳೆಗಾರರಿಗೆ ನೆರವಾಗುವ ನಿರ್ಧಾರ ತೆಗೆದುಕೊಳ್ಳುವಂತೆ ಸರ್ಕಾರಕ್ಕೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಸಲಹೆ ನೀಡಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಬ್ಬು ಅರೆಯುವ ಎರಡು ತಿಂಗಳ ಮೊದಲೇ ರೈತರು ಹಾಗೂ ಕಾರ್ಖಾನೆ ಮಾಲೀಕರ ಸಂದಾನ ಸಭೆ ನಡೆಸಬೇಕಿತ್ತು ಎಂದು ತಿಳಿಸಿದ್ದಾರೆ.

ಸಮಸ್ಯೆ ಉಲ್ಬಣಿಸಿದ ಮೇಲೆ ಪ್ರಧಾನಿಯವರಿಗೆ ಪತ್ರ ಬರೆದು ಕೇಂದ್ರ ಸರ್ಕಾರವನ್ನು ದೂರುವ ಯತ್ನ ಮಾಡಲಾಗುತ್ತಿದೆ ಎಂದು ಆರೋಪಿಸಿದ್ದಾರೆ.

ಇನ್ನೊಂದೆಡೆ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಸಮಾಜಿಕ ಜಾಲತಾಣದಲ್ಲಿ ಟ್ವೀಟ್ ಮಾಡಿ ಮುಖ್ಯಮಂತ್ರಿ ಸಿದ್ದರಾಮಯ್ಯ ಕಬ್ಬು ಬೆಳೆಗಾರರ ಸಮಸ್ಯೆ ಆಲಿಸುವಲ್ಲಿ ವಿಫಲರಾಗಿದ್ದಾರೆ ಎಂದು ಆರೋಪಿಸಿದ್ದಾರೆ.

೨೦೨೪-೨೦೨೫ ರಲ್ಲಿ ಕರ್ನಾಟಕದಿಂದ ತೈಲ ಮಾರುಕಟ್ಟೆ ಕಂಪನಿಗಳಿಗೆ ೧೩೯.೮ ಕೋಟಿ ಲೀಟರ್ ಎಥೆನಾಲ್ ಪೂರೈಸಲಾಗಿದೆ ಎಂದು ತಿಳಿಸಿದ್ದಾರೆ.

***************

ಕಬ್ಬು ಬೆಳೆಗಾರರ ವಿಚಾರದಲ್ಲಿ ರಾಜ್ಯ ಸರ್ಕಾರ ಜಾಣ ಕುರುಡತನ ತೋರಿಸುತ್ತಿದೆ ಎಂದು ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಆರೋಪಿಸಿದ್ದಾರೆ.

ದಾವಣಗೆರೆಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಕಬ್ಬು ಬೆಳೆಗಾರರು ಕಳೆದ ೮ ದಿನಗಳಿಂದ ಹೋರಾಟ ನಡೆಸುತ್ತಿದ್ದಾರೆ. ಹೋರಾಟ ಸ್ಥಳಕ್ಕೆ ಭೇಟಿ ನೀಡುವ ಬದಲು, ಮುಖ್ಯಮಂತ್ರಿ ಸಿದ್ದರಾಮಯ್ಯ, ಪ್ರಧಾನಿಗೆ ಪತ್ರ ಬರೆಯಲಾಗಿದೆ ಎಂದು ಹಾರಿಕೆ ಉತ್ತರ ನೀಡುತ್ತಿದ್ದಾರೆ ಎಂದು ದೂರಿದ್ದಾರೆ.

***************

ಪ್ರಧಾನಿ ನರೇಂದ್ರ ಮೋದಿ ವಾರಣಾಸಿಯಲ್ಲಿ ನಾಳೆ ನಾಲ್ಕು ವಂದೇ ಭಾರತ್ ರೈಲುಗಳಿಗೆ ವರ್ಚುವಲ್ ಮೂಲಕ ಚಾಲನೆ ನೀಡಲಿದ್ದಾರೆ. ಬೆಂಗಳೂರು-ಎರ್ನಾಕುಲಂ, ವಂದೇ ಭಾರತ್ ರೈಲಿಗೂ ಹಸಿರು ನಿಶಾನೆ ತೋರಲಿದ್ದಾರೆ.

ಈ ಹೊಸ ರೈಲು ಸೇವೆ ಪ್ರಯಾಣದ ಸಮಯವನ್ನು ಗಣನೀಯವಾಗಿ ಕಡಿಮೆ ಮಾಡಲಿದೆ.

ಪ್ರಾದೇಶಿಕ ಸಂಚಾರ, ಪ್ರವಾಸೋದ್ಯಮ ಮತ್ತು ಆರ್ಥಿಕ ಚಟುವಟಿಕೆಗಳನ್ನು ಉತ್ತೇಜಿಸಲಿದೆ.

ಬೆಂಗಳೂರಿನಿಂದ ಬೆಳಗ್ಗೆ ೫.೧೦ ಕ್ಕೆ ಹೊರಡುವ ಈ ರೈಲು, ಮಧ್ಯಾಹ್ನ ೧.೫೦ ಕ್ಕೆ ಎರ್ನಾಕುಲಂ ತಲುಪಲಿದೆ. ಅಲ್ಲಿಂದ ಮಧ್ಯಾಹ್ನ ೨.೨೦ ಕ್ಕೆ ಹೊರಟು ರಾತ್ರಿ ೧೧ ಕ್ಕೆ ಬೆಂಗಳೂರು ತಲುಪಲಿದೆ. ೮ ಗಂಟೆ ೪೦ ನಿಮಿಷಗಳಲ್ಲಿ ಈ ವಂದೇ ಭಾರತ್ ರೈಲು ಅತ್ಯಂತ ವೇಗವಾಗಿ ತಲುಪಲಿದೆ.

***************

ಶಕ್ತಿ ಯೋಜನೆಯಡಿ ಈವರೆಗೆ ೫೯೩ ಕೋಟಿ ಮಹಿಳೆಯರು ಪ್ರಯಾಣಿಸಿದ್ದು, ೧೫ ಸಾವಿರದ ೨೦೦ ಕೋಟಿ ರೂಪಾಯಿ ಖರ್ಚು ಮಾಡಲಾಗಿದೆ ಎಂದು ಸಾರಿಗೆ ಸಚಿವ ರಾಮಲಿಂಗಾರಡ್ಡಿ ಸ್ಪಷ್ಟಪಡಿಸಿದ್ದಾರೆ.

ಹುಬ್ಬಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಿಂದಿನ ಸರ್ಕಾರದಲ್ಲಿ ಸಾರಿಗೆ ಇಲಾಖೆಯು ೪ ಸಾವಿರ ಕೋಟಿ ರೂಪಾಯಿ ಸಾಲ ಮಾಡಿತ್ತು. ನಮ್ಮ ಸರ್ಕಾರ ಬಂದ ನಂತರ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ೨ ಸಾವಿರ ಕೋಟಿ ರೂಪಾಯಿ ಹಾಗೂ ಹೊಸ ಬಸ್ ಖರೀದಿಗೆ ೮೦೦ ಕೋಟಿ ರೂಪಾಯಿ ನೀಡಲಾಗಿದೆ ಎಂದು ಹೇಳಿದ್ದಾರೆ.

ವೇತನ ಪರಿಷ್ಕರಣೆ ವಿಚಾರದಲ್ಲಿ ತಾಂತ್ರಿಕ ದೋಷದಿಂದ ಸಮಸ್ಯೆಯಾಗಿದೆ. ಶೀಘ್ರವೇ ಮುಖ್ಯಮಂತ್ರಿ ನೇತೃತ್ವದಲ್ಲಿ ಸಭೆ ನಡೆಯಲಿದ್ದು, ಸೂಕ್ತ ನಿರ್ಧಾರ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದ್ದಾರೆ.

ಧ್ವನಿ: ರಾಮಲಿಂಗಾರೆಡ್ಡಿ ( ೩೪ ಸೆಕೆಂಡ್ಸ್)

***************

ಶಿಕ್ಷಣ ಸಂಸ್ಥೆಗಳು, ಆಸ್ಪತ್ರೆಗಳು, ಸಾರ್ವಜನಿಕ ಕ್ರೀಡಾ ಸಂಕೀರ್ಣಗಳು, ಬಸ್ ಮತ್ತು ರೈಲ್ವೆ ನಿಲ್ದಾಣಗಳ ಆವರಣಗಳಿಂದ ಬೀದಿ ನಾಯಿಗಳನ್ನು ಸ್ಥಳಾಂತರಿಸುವಂತೆ ಸುಪ್ರೀಂಕೋರ್ಟ್ ಎಲ್ಲಾ ರಾಜ್ಯಗಳಿಗೆ ಹಾಗೂ ಕೇಂದ್ರಾಡಳಿತ ಪ್ರದೇಶಗಳಿಗೆ ನಿರ್ದೇಶನ ನೀಡಿದೆ.

ಇದೇ ವೇಳೆ, ಹೆದ್ದಾರಿಗಳಲ್ಲಿ ಬೀದಿ ನಾಯಿ ಹಾಗೂ ಬಿಡಾಡಿ ಹಸುಗಳನ್ನು ತೆರವುಗೊಳಿಸುವಂತೆಯೂ ನ್ಯಾಯಾಲಯ ಸೂಚಿಸಿದೆ.

ದೇಶಾದ್ಯಂತ ಬೀದಿ ನಾಯಿ ನಿರ್ವಹಣೆ ಕುರಿತಾದ ಸ್ವಯಂ ಪ್ರೇರಿತ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ವಿಕ್ರಮ್ ನಾಥ್, ಸಂದೀಪ್ ಮೆಹ್ತಾ, ಎನ್.ಅಂಜಾರಿಯಾ ನೇತೃತ್ವದ ಪೀಠವು ಬೀದಿ ನಾಯಿಗಳನ್ನು ಸಂತಾನ ಶಕ್ತಿ ಹರಣ ಚಿಕಿತ್ಸೆ ಬಳಿಕ ಅದೇ ಪ್ರದೇಶಗಳಿಗೆ ಮತ್ತೆ ಬಿಡಬಾರದು ಎಂದು ತಿಳಿಸಿದೆ.

***************

ರಾಜ್ಯದ ವಿವಿಧೆಡೆ ಇಂದು ವಂದೇ ಮಾತರಂನ ೧೫೦ನೇ ವಾರ್ಷಿಕೋತ್ಸವದ ಹಿನ್ನೆಲೆಯಲ್ಲಿ ಸಾಮೂಹಿಕ ಗಾಯನ ನಡೆಯಿತು. ಹುಬ್ಬಳ್ಳಿಯ ನೈಋತ್ಯ ಕಚೇರಿಯಲ್ಲೂ ಸಾಮೂಹಿಕ ಗಾಯನ ನಡೆಯಿತು.

ಬಾಗಲಕೋಟೆಯಲ್ಲಿ ನಡೆದ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ, “ವಂದೇ ಮಾತರಂ ಗೀತೆ ದೇಶಾಭಿಮಾನ, ಏಕತೆ ಮತ್ತು ತ್ಯಾಗದ ಸಂಕೇತವಾಗಿದೆ. ಯುವ ಪೀಳಿಗೆಯವರು ಈ ಗೀತೆಯ ಅರ್ಥವನ್ನು ಅರಿತು ದೇಶಪ್ರೇಮದ ಭಾವನೆಯನ್ನು ಉಳಿಸಿಕೊಳ್ಳಬೇಕು,” ಎಂದು ಕರೆ ನೀಡಿದರು.

ದೇಶದ ಅಪ್ರತಿಮ ಸ್ವಾತಂತ್ರ್ಯ ಹೋರಾಟಗಾರ ಬಂಕಿಂ ಚಂದ್ರ ಚಟರ್ಜಿಯವರು ರಚಿಸಿದ ವಂದೇ ಮಾತರಂ ಗೀತ ಗಾಯನಕ್ಕೆ ೧೫೦ ವರ್ಷಗಳು ತುಂಬಿದ ಪ್ರಯುಕ್ತ ಗದಗ ನಗರದ ತೋಂಟದಾರ್ಯ ಮಠದ ಬಳಿ ವಿಶೇಷ ಕಾರ್ಯಕ್ರಮ ಜರುಗಿತು.

ಮಾಜಿ ಸಚಿವ, ನರಗುಂದ ಶಾಸಕ ಸಿ.ಸಿ.ಪಾಟೀಲ್ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

***************

ಧಾರವಾಡದಲ್ಲಿ ನಡೆದ ರಾಜ್ಯ ಮಟ್ಟದ ಪುರುಷರ ಲಾನ್ ಟೆನ್ನಿಸ್ ಪಂದ್ಯಾವಳಿಯನ್ನು ಕಾರ್ಮಿಕ ಸಚಿವ ಸಂತೋಷ್ ಲಾಡ್ ಉದ್ಘಾಟಿಸಿದರು.

ಬಳಿಕ ಮಾತನಾಡಿದ ಅವರು, ಈ ಬಾರಿ ಪಂದ್ಯಾವಳಿಗೆ ಅಭೂತಪೂರ್ವ ಪ್ರತಿಕ್ರಿಯೆ ವ್ಯಕ್ತವಾಗಿದೆ. ೩೦೦ಕ್ಕೂ ಹೆಚ್ಚು ಕ್ರೀಡಾಪಟುಗಳು ಧಾರವಾಡದಿಂದ ಭಾಗವಹಿಸಿದ್ದು, ಇದು ರಾಜ್ಯದಲ್ಲಿ ಟೆನ್ನಿಸ್ ಕ್ರೀಡೆಯ ಜನಪ್ರಿಯತೆಯನ್ನು ಎತ್ತಿ ಹಿಡಿದಿದೆ ಎಂದು ಹೇಳಿದ್ದಾರೆ.

ಕ್ರೀಡೆಯು ದೈಹಿಕ ಮತ್ತು ಮಾನಸಿಕ ಆರೋಗ್ಯಕ್ಕೆ ಅತ್ಯಗತ್ಯ ಎಂದು ಅವರು ತಿಳಿಸಿದ್ದಾರೆ.

***************

ದೇವನಹಳ್ಳಿ ತಾಲೂಕಿನ ಚನ್ನರಾಯಪಟ್ಟಣ ಹೋಬಳಿಯ ೧೩ ಹಳ್ಳಿಗಳ ರೈತರ ಭೂಸ್ವಾಧೀನ ಪ್ರಕ್ರಿಯೆ ರದ್ದುಗೊಳಿಸುವ ಕುರಿತು, ಮುಖ್ಯಮಂತ್ರಿಗಳ ಗಮನಕ್ಕೆ ತರಲಾಗುವುದು ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಉಸ್ತುವಾರಿ ಸಚಿವ ಕೆ.ಎಚ್ ಮುನಿಯಪ್ಪ ತಿಳಿಸಿದ್ದಾರೆ.

ಮುಖ್ಯಮಂತ್ರಿಗಳು ಹಾಗೂ ಕೈಗಾರಿಕಾ ಸಚಿವರೊಂದಿಗೆ ಸಂಪುಟ ಸಭೆಯಲ್ಲಿ ಚರ್ಚೆ ನಡೆಸಿ ಸಮಸ್ಯೆ ಬಗೆಹರಿಸಲಾಗುವುದು ಎಂದು ಹೇಳಿದ್ದಾರೆ.

ಚನ್ನರಾಯಪಟ್ಟಣ ಹೋಬಳಿಯ ಸ್ವಾಧೀನ ಪ್ರಕ್ರಿಯೆಯನ್ನು ಸಂಪೂರ್ಣವಾಗಿ ಕೈಬಿಡುವುದಾಗಿ ಜುಲೈ ೧೫ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಿಸಿದ್ದರು. ಬಳಿಕ ಯಾವುದೇ ಪ್ರಕ್ರಿಯೆ ನಡೆದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

*******ಮುಕ್ತಾಯ*******